# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಬಿ ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 333 |
| ಉತ್ತರಿಸಬೇಕಾದ ದಿನಾಂಕ | : | 21.12.2022 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸರ್ಕಾರ ಮತ್ತು ಖಾಸಗಿ ಸಂಘ-ಸಂಸ್ಥೆಗಳು ನಡೆಸುತ್ತಿರುವ ಒಟ್ಟು ಗೋಶಾಲೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td rowspan="2">ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ 2 ಸರ್ಕಾರಿ ಗೋಶಾಲೆಗಳ ನಿರ್ಮಾಣ ಕಾಮಗಾರಿ ನಡೆಯುತ್ತಿದೆ.<br><br>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಖಾಸಗಿ ಪಿಂಜರಾಪೋಲ್ ಗೋಶಾಲೆ ಹಾಗೂ ಅವುಗಳಲ್ಲಿರುವ ಜಾನುವಾರುಗಳ ವಿವರ ಕೆಳಕಂಡಂತಿದೆ.<br>
<table>
<tr><th>ಜಿಲ್ಲೆ</th><th>ಗೋಶಾಲೆಗಳ ಸಂಖ್ಯೆ</th><th>ಜಾನುವಾರುಗಳ ಸಂಖ್ಯೆ</th></tr>
<tr><td>ಯಾದಗಿರಿ</td><td>5</td><td>415</td></tr>
<tr><td>ಕಲಬುರ್ಗಿ</td><td>14</td><td>1852</td></tr>
</table></td></tr>
<tr><td>ಆ)</td><td>ಸದರಿ ಗೋಶಾಲೆಗಳಲ್ಲಿರುವ ಗೋವುಗಳ ಸಂಖ್ಯೆ ಎಷ್ಟು;</td></tr>
<tr><td>ಇ)</td><td>ಸರ್ಕಾರವು ಪ್ರತಿ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಗೋಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿದೆಯೇ; ಹಾಗಿದ್ದಲ್ಲಿ, ಮೇಲ್ಕಂಡ ಜಿಲ್ಲೆಗಳಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಗೋಶಾಲೆಗಳನ್ನು ತೆರೆಯಲಾಗಿದೆ; (ವಿವರ ನೀಡುವುದು)</td><td>ಸರ್ಕಾರವು 2021-22ನೇ ಸಾಲಿನಲ್ಲಿ ಪ್ರತಿ ಜಿಲ್ಲೆಗೊಂದು 30 ಸರ್ಕಾರಿ ಗೋಶಾಲೆಯನ್ನು ಪ್ರಾರಂಭಿಸುವ ಪ್ರಕ್ರೀಯೆ ಜಾರಿಯಲ್ಲಿರುತ್ತದೆ.<br>2022-23ನೇ ಸಾಲಿನಲ್ಲಿ ಜಿಲ್ಲೆಗಳ ಜಾನುವಾರುಗಳ ಸಂಖ್ಯೆಗನುಗುಣವಾಗಿ ಹೊಸದಾಗಿ 70 ಸರ್ಕಾರಿ ಗೋಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿದೆ, ಸೂಕ್ತ ಸ್ಥಳಗಳ ಅಯ್ಕೆಗೆ ಕ್ರಮವಹಿಸಲಾಗುತ್ತಿದೆ.<br>ಕಲಬುರಗಿ ಜಿಲ್ಲೆಯಲ್ಲಿ ಜಾನುವಾರುಗಳ ಸಂಖ್ಯೆ ಹಾಗೂ ಜಮೀನಿನ ಲಭ್ಯತೆಗೆ ಅನುಗುಣವಾಗಿ ಒಟ್ಟು 5 ಸರ್ಕಾರಿ ಗೋಶಾಲೆಗಳನ್ನು ತೆರೆಯಲು ಗುರಿ ನಿಗದಿಪಡಿಸಿದೆ.<br>ಯಾದಗಿರಿ ಜಿಲ್ಲೆಯಲ್ಲಿ ಜಾನುವಾರುಗಳ ಸಂಖ್ಯೆ ಹಾಗೂ ಜಮೀನಿನ ಲಭ್ಯತೆಗೆ ಅನುಗುಣವಾಗಿ ಒಟ್ಟು 2 ಸರ್ಕಾರಿ ಗೋಶಾಲೆಗಳನ್ನು ತೆರೆಯಲು ಗುರಿ ನಿಗದಿಪಡಿಸಿದೆ. (ವಿವರ ಲಗತ್ತಿಸಿದೆ)</td></tr>
</table>

| | | |
|---|---|---|
| ಈ) | ಗೋಶಾಲೆಗಳನ್ನು ತೆರೆಯಲು ಸರ್ಕಾರ ಮೀಸಲಿರಿಸಿದ ಅನುದಾನವೆಷ್ಟು? (ವಿವರ ನೀಡುವುದು) | 2021–22 ನೇ ಸಾಲಿನಲ್ಲಿ ಸರ್ಕಾರಿ ಗೋಶಾಲೆ ಸ್ಥಾಪನೆಗೆ ಒಟ್ಟು ರೂ.1500.00 ಲಕ್ಷ ಅನುದಾನ ಬಿಡುಗಡೆಯಾಗಿರುತ್ತದೆ.<br>2022–23 ನೇ ಸಾಲಿನ ಸರ್ಕಾರಿ ಗೋಶಾಲೆ ಸ್ಥಾಪನೆಗೆ ಒಟ್ಟು ರೂ.3500.00 ಲಕ್ಷ ಅನುದಾನ ಮೀಸಲಿರಿಸಿದೆ. ಇದರಲ್ಲಿ ಇಲ್ಲಿಯವರೆಗೆ ರೂ.2625.00ಗಳ ಅನುದಾನ ಬಿಡುಗಡೆಯಾಗಿರುತ್ತದೆ. (ವಿವರ ಅನುಬಂಧದಲ್ಲಿ ನೀಡಲಾಗಿದೆ) |

**ಇ- ಪಸಂಮೀ 289 ಸಲೆವಿ 2022**

**(ಪ್ರಭು ಬಿ. ಚವ್ಹಾಣ್)**
**ಪಶುಸಂಗೋಪನೆ ಸಚಿವರು**